# ಕರ್ನಾಟಕ ವಿಧಾನಸಭೆ

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1752 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶರಣಗೌಡ ಕಂದಕೂರ್(ಗುರ್‌ಮಿಠ್‌ಕಲ್) |
| ಉತ್ತರಿಸಬೇಕಾದ ದಿನಾಂಕ | 17.03.2026 |
| ಉತ್ತರಿಸುವ ಸಚಿವರು | ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಯಾದಗಿರಿ ಜಿಲ್ಲೆ ಗುರುಮಿಠಕಲ್ ತಾಲ್ಲೂಕಿನಲ್ಲಿ ಖಾಯಂ ನ್ಯಾಯಾಲಯ ಪೀಠ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; | ಹೌದು<br><br>ಹೊಸದಾಗಿ ರಚಿಸಲಾದ 38 ತಾಲ್ಲೂಕುಗಳಲ್ಲಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯವನ್ನು ಸ್ಥಾಪಿಸಲು ಕರ್ನಾಟಕ ಉಚ್ಚ ನ್ಯಾಯಾಲಯದಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಯಲ್ಲಿ ಯಾದಗಿರಿ ಜಿಲ್ಲೆಯ ಗುರ್‌ಮಿಠ್‌ಕಲ್ ತಾಲ್ಲೂಕು ಸಹ ಒಳಗೊಂಡಿರುತ್ತದೆ.<br><br>ಕೆಲವು ಜಿಲ್ಲೆಗಳಲ್ಲಿ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ಬಾಕಿ ಇರುವುದರಿಂದ, ಸರ್ಕಾರವು ಆದ್ಯತೆಯ ಆಧಾರದ ಮೇಲೆ ಮಂಜೂರು ಮಾಡಬೇಕಾದ 19 ನ್ಯಾಯಾಲಯಗಳ ಪರಿಷ್ಕೃತ ಪಟ್ಟಿಯನ್ನು ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ ಇವರು ಒದಗಿಸಿದ್ದು, ಸದರಿ ಆದ್ಯತಾ ಪಟ್ಟಿಯಲ್ಲಿ ಯಾದಗಿರಿ ಜಿಲ್ಲೆಯ ಗುರ್‌ಮಿಠ್‌ಕಲ್ ತಾಲ್ಲೂಕಿನಲ್ಲಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ |
| ಆ) | ಯಾವ ಕಾಲಮಿತಿಯೊಳಗೆ ಗುರುಮಿಠಕಲ್ ತಾಲ್ಲೂಕಿನಲ್ಲಿ ಖಾಯಂ ನ್ಯಾಯಾಲಯ ಪೀಠ ಪ್ರಾರಂಭಿಸಲಾಗುವುದು? | |

| | | |
|---|---|---|
| | | ನ್ಯಾಯಾಲಯ ಸ್ಥಾಪಿಸುವ ಪ್ರಸ್ತಾವನೆ ಒಳಗೊಂಡಿರುವುದಿಲ್ಲ.<br><br>ಆದರಂತೆ, ಮೊದಲ ಹಂತದಲ್ಲಿ ಆದ್ಯತೆಯ ಆಧಾರದ ಮೇಲೆ 19 ನ್ಯಾಯಾಲಯಗಳಿಗೆ ಮಂಜೂರಾತಿ ನೀಡಿ, ನಂತರ ರಾಜ್ಯದಲ್ಲಿ ಉಳಿದ ನ್ಯಾಯಾಲಯಗಳ ಸ್ಥಾಪನೆಗೆ ಸಹಮತಿ ನೀಡುವಂತೆ ಆರ್ಥಿಕ ಇಲಾಖೆಗೆ ಕಡತ ಸಲ್ಲಿಕೆಯಾಗಿದೆ. ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಲಾ-ಎಲ್‌ಸಿಇ/68/2026**

(ಎಚ್.ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು